# ಕರ್ನಾಟಕ ಸರ್ಕಾರ

ಸಂಖ್ಯೆ: RDPR/7/GPS/2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:27-01-2021

## ಸುತ್ತೋಲೆ

ವಿಷಯ: ಗ್ರಾಮ ಠಾಣಾ ವ್ಯಾಪ್ತಿಯಲ್ಲಿರುವ ವಕ್ಫ್ ಆಸ್ತಿಗಳನ್ನು ಪಂಚತಂತ್ರ ಮತ್ತು ಇ-ಸ್ವತ್ತು ತಂತ್ರಾಂಶದಲ್ಲಿ ಫ್ಲಾಗ್ ಮಾಡುವ ಬಗ್ಗೆ.

ಉಲ್ಲೇಖ:
1. ಕಂದಾಯ ಇಲಾಖೆಯ ಸುತ್ತೋಲೆ ಸಂಖ್ಯೆ: ಕಂಇ 97 ಟಿಆರ್ ಎಂ 2020 ದಿನಾಂಕ:29-08-2020.
2. ಸರ್ಕಾರದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ ರವರ ಅರೆ ಸರ್ಕಾರಿ ಪತ್ರ ಸಂಖ್ಯೆ: MWD 95 WES 2020,ದಿನಾಂಕ:29-09-2020.

***

ಉಲ್ಲೇಖ (2) ರಲ್ಲಿ ಸರ್ಕಾರದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ ರವರ ಅರೆ ಸರ್ಕಾರಿ ಪತ್ರದಲ್ಲಿ ದಿನಾಂಕ:08-07-2020 ರಂದು ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗ ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ ಸಭೆಯಲ್ಲಿ ವಕ್ಫ್ ಆಸ್ತಿಗಳನ್ನು ಫ್ಲಾಗ್ ಆನ್ ಮಾಡುವ ಬಗ್ಗೆ ಪ್ರಸ್ತಾವನೆ ಸಲ್ಲಿಸುವಂತೆ ತಿಳಿಸಿರುತ್ತಾರೆ.

ಉಲ್ಲೇಖ(1) ರಲ್ಲಿ ವಕ್ಫ್ ಆಸ್ತಿಗಳನ್ನು ಭೂಮಿ ತಂತ್ರಾಂಶದಲ್ಲಿ ಫ್ಲಾಗ್ ಮಾಡುವ ಬಗ್ಗೆ ಕಂದಾಯ ಇಲಾಖೆಯು ಸುತ್ತೋಲೆಯನ್ನು ಹೊರಡಿಸಿರುತ್ತದೆ. ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅಧೀನದಲ್ಲಿ ಒಟ್ಟು 9614 ವಕ್ಫ್ ಆಸ್ತಿಗಳಿದ್ದು, ಇದರ ಪೈಕಿ 6507 ಆಸ್ತಿಗಳ ಸಂಸ್ಥೆಯ ಹೆಸರಿಗೆ ಖಾತೆ ಮಾಡಲಾಗಿರುತ್ತದೆ. ಉಳಿದ 3107 ಆಸ್ತಿಗಳ ಖಾತೆ ಬದಲಾವಣೆ ಆಗಾಬೇಕಾಗಿದೆ. ಒಟ್ಟು 9614 ಆಸ್ತಿಗಳನ್ನು "ಇ-ಸ್ವತ್ತು" ತಂತ್ರಾಂಶದಲ್ಲಿ ಅಳವಡಿಸಿ ನೋಂದಣಿ ಇಲಾಖೆಯ ಕಾವೇರಿ ತಂತ್ರಾಂಶದಲ್ಲಿ ಫ್ಲಾಗ್ ಆಫ್ (ಲಾಕ್) ಮಾಡಲು ರಾಜ್ಯದ್ಯಾಂತ ಎಲ್ಲಾ ಅಧೀನ ಅಧಿಕಾರಿಗಳಿಗೆ ಸೂಚಿಸಿ, ಇಲಾಖೆಯಿಂದ ಕಾಲಕಾಲಕ್ಕೆ ನಡೆಯುವ ಸಭೆ ಹಾಗೂ ವಿಡಿಯೋ ಸಮ್ಮೇಳನಗಳಲ್ಲಿ ಈ ಕಾರ್ಯ ಪೂರ್ಣಗೊಳಿಸಲು ಸೂಚಿಸಬೇಕೆಂದು ಕೋರಲಾಗಿದೆ. ಜಿಲ್ಲಾವಾರು ವಕ್ಫ್ ಆಸ್ತಿಗಳ ಪಟ್ಟಿಯನ್ನು ಲಗತ್ತಿಸಿದೆ.

ವಕ್ಫ್ ಆಸ್ತಿಗಳ 2ನೇ ಸರ್ವೆಗೆ ಸಂಬಂಧಿಸಿದಂತೆ, ಕಂದಾಯ ಇಲಾಖೆಯು ಫ್ಲಾಗ್ ಆನ್ ಮಾಡಿರುವ ರೀತಿಯಲ್ಲಿ ಗ್ರಾಮಠಾಣಾಗಳಲ್ಲಿರುವ ವಕ್ಫ್ ಆಸ್ತಿಗಳ ಮಾಹಿತಿಯು ಸಿ.ಡಿ.ಯಲ್ಲಿದ್ದು, ಸದರಿ ಸಿ.ಡಿ.ಯಲ್ಲಿರುವ ವಕ್ಫ್ ಆಸ್ತಿಗಳನ್ನು ನೊಂದಣಿ ಇಲಾಖೆಯ ಇ-ಸ್ವತ್ತು ಮತ್ತು ಪಂಚತಂತ್ರ ತಂತ್ರಾಂಶದಲ್ಲಿ ಫ್ಲಾಗ್ ಆನ್ ಮಾಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡುವಂತೆ ಕೋರಿರುತ್ತಾರೆ.

ಆದುದರಿಂದ ವಕ್ಫ್ ಆಸ್ತಿಗಳ 2ನೇ ಸರ್ವೆಗೆ ಸಂಬಂಧಿಸಿದಂತೆ, ಕಂದಾಯ ಇಲಾಖೆಯು ಫ್ಲಾಗ್ ಆನ್ ಮಾಡಿರುವ ರೀತಿಯಲ್ಲಿ ಗ್ರಾಮಠಾಣಾಗಳಲ್ಲಿರುವ ವಕ್ಫ್ ಆಸ್ತಿಗಳನ್ನು ಇ-ಸ್ವತ್ತು ಮತ್ತು ಪಂಚತಂತ್ರ ತಂತ್ರಾಂಶದಲ್ಲಿ ಫ್ಲಾಗ್ ಆನ್ ಮಾಡಲು ಅಗತ್ಯ ಕ್ರಮ ಕೈಗೊಳ್ಳುವಂತೆ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದೆ.

(ಕೆ.ಬಿ. ಆಂಜನಪ್ಪ)
ನಿರ್ದೇಶಕರು (ಪಂ.ರಾಜ್-1) ಹಾಗೂ ಪದನಿಮಿತ್ತ ಸರ್ಕಾರದ
ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಇವರಿಗೆ:**

1. ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಕಾಳಿದಾಸ ಮಾರ್ಗ, ಕೆ.ಜಿ. ರಸ್ತೆ, ಗಾಂಧಿನಗರ, ಬೆಂಗಳೂರು.
2. ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು.
3. State Informatics Officer, National Informatics Centre, Karnataka State Unit,6th Floor, Mini Tower, Ambedkar Veedhi, **BANGALURU-560001.**
4. ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು(ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
5. ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು(ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ ರವರಿಗೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿರವರಿಗೆ.
4. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ.
5. ಮುಖ್ಯ ಕಾರ್ಯನಿರ್ವಾಹಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ , ಕನ್ನಿಂಗ್ ಹ್ಯಾಮ್ ರಸ್ತೆ, ಬೆಂಗಳೂರು.
6. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.